# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು - 572 103

ಸಂಖ್ಯೆ:ತುವಿ:ಶೈವಿ:2021-22: 8916. ದಿನಾಂಕ:03.12.2021

## ಸುತ್ತೋಲೆ

**ವಿಷಯ:** ಕೋವಿಡ್-19ನ ಓಮಿಕ್ರಾನ್ ವೈರಾಣು ಪ್ರಸರಣ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಕುರಿತು.

**ಉಲ್ಲೇಖ:** 1. ಸರ್ಕಾರದ ಮಾರ್ಗಸೂಚಿ ಪತ್ರ ಸಂಖ್ಯೆ:No.HFW326 PRS2021 ದಿನಾಂಕ:28.11.2021

2. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 02.12.2021 (ಕಂಡಿಕೆ: 55 ಪುಟ ಸಂಖ್ಯೆ: 14)

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೋವಿಡ್-19ನ ಓಮಿಕ್ರಾನ್ ವೈರಾಣು ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಉಲ್ಲೇಖ (01)ರ ಸರ್ಕಾರದ ಮಾರ್ಗಸೂಚಿಯನ್ವಯ ಮುನ್ನೆಚ್ಚರಿಕಾ ಕ್ರಮಕೈಗೊಳ್ಳಲು ಕೋವಿಡ್-19 ಮಾರ್ಗಸೂಚಿಗಳನ್ವಯ ಎರಡು ಡೋಸ್ ಲಸಿಕೆ ಪಡೆಯುವುದು, ಮಾಸ್ಕ್‌ನ್ನು ಕಡ್ಡಾಯವಾಗಿ ಬಳಸುವುದು, ಭೌತಿಕ ಅಂತರ ಕಾಪಾಡುವುದು, ಮುಂತಾದ ಮುಂಜಾಗ್ರತಾ ಕ್ರಮಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ತಿಳಿಸಲಾಗಿದೆ, ಹಾಗೆಯೇ ಸರ್ಕಾರದ ಪ್ರಮಾಣಿತ ಕಾರ್ಯಚರಣಾ ವಿಧಾನ-ಮಾರ್ಗಸೂಚಿ ಅನ್ವಯ ಕೋವಿಡ್ ನಿಯಮಗಳನ್ನು ಪಾಲಿಸುವಂತೆ ತಿಳಿಸಲಾಗಿದೆ.

ಈ ಸಂಬಂಧ ಮೇಲ್ಕಂಡ ವಿವರಗಳಂತೆ, ತಮ್ಮ ಕಾಲೇಜುಗಳಲ್ಲಿ ಕೋವಿಡ್-19 ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಲು ಎಲ್ಲಾ ಅಧ್ಯಾಪಕ ಸಿಬ್ಬಂದಿಗಳ ಮತ್ತು ವಿದ್ಯಾರ್ಥಿಗಳ ಗಮನಕ್ಕೆ ತರುವಂತೆ ಈ ಮೂಲಕ ತಿಳಿಸಲಾಗಿದೆ.

1. ಎಲ್ಲಾ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳನ್ನು ಕಡ್ಡಾಯವಾಗಿ ಥರ್ಮಲ್ ಸ್ಕ್ಯಾನಿಂಗ್‌ಗೆ ಒಳಪಡಿಸುವುದು ಮತ್ತು ಸದರಿ ಕಾರ್ಯಕ್ಕೆ ಎಲ್ಲರೂ ಸಹಕರಿಸುವುದು.
2. ವಿಶ್ವವಿದ್ಯಾನಿಲಯದಲ್ಲಿ ಆಯೋಜಿಸಲು ಉದ್ದೇಶಿಸಿರುವ ಎಲ್ಲಾ ಸಾಮಾಜಿಕ ಮತ್ತು ಸಾಂಸ್ಕೃತಿ ಕಾರ್ಯಕ್ರಮಗಳನ್ನು (ಸೆಮಿನಾರ್/ಸಮ್ಮೇಳನ/ಕ್ರೀಡಾ ಕಾರ್ಯಕ್ರಮಗಳು ಇತ್ಯಾದಿ) ಎರಡು ತಿಂಗಳ ಅವಧಿಯವರೆಗೆ ಮುಂದೂಡಬಹುದಾಗಿದೆ.
3. ಎಲ್ಲಾ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಎರಡು ಡೋಸ್ ಕೋವಿಡ್ ಲಸಿಕೆಗಳನ್ನು ಕಡ್ಡಾಯವಾಗಿ ಪಡೆದಿರತಕ್ಕದ್ದು ಹಾಗೂ ಸರ್ಕಾರ ಮತ್ತು ವಿಶ್ವವಿದ್ಯಾನಿಲಯದ ಆದೇಶಗಳನ್ವಯ ಕೋವಿಡ್-19 ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವುದು.
4. ಸಿಬ್ಬಂದಿಗಳು/ವಿದ್ಯಾರ್ಥಿಗಳು ಕಚೇರಿ, ವಿಭಾಗ ಮತ್ತು ತರಗತಿಗಳಲ್ಲಿ ಹಾಜರಿರುವಾಗ ಮಾಸ್ಕ್, ಸ್ಯಾನಿಟೈಸರ್‌ನ್ನು ಬಳಸುವುದು ಹಾಗೂ ಸಾಮಾಜಿಕ/ಭೌತಿಕ ಅಂತರವನ್ನು ತಪ್ಪದೆ ಕಾಯ್ದುಕೊಳ್ಳುವುದು.
5. ಓಮಿಕ್ರಾನ್ ವೈರಾಣು ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ರೋಗ ಲಕ್ಷಣಗಳು ಕಂಡುಬಂದ ಕೂಡಲೇ ವೈಯಕ್ತಿಕವಾಗಿ ಪರೀಕ್ಷಿಗೊಳಪಟ್ಟು, ಮುನ್ನೆಚ್ಚರಿಕಾ ಕ್ರಮಕೈಗೊಳ್ಳಲು ಸೂಚಿಸಿದೆ.
6. ಸಿಬ್ಬಂದಿಗಳಿಗೆ ಮತ್ತು ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ಕೆಮ್ಮು, ನೆಗಡಿ, ಜ್ವರ, ಮೈಕೈನೋವು, ಗಂಟಲಿನ ತುರಿಕೆ, ಒಣಕೆಮ್ಮು ಹಾಗೂ ಉಸಿರಾಟದ ತೊಂದರೆ ಇದ್ದಲ್ಲಿ ಸದರಿಯವರು ನೋಡಲ್ ಅಧಿಕಾರಿಗಳು, ಕೋವಿಡ್-19 ಘಟಕ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರಿಗೆ ಕೂಡಲೇ ತಿಳಿಸುವುದು.

ಅಡಕ: ಉಲ್ಲೇಖ(01)ರ ಸರ್ಕಾರದ ಮಾರ್ಗಸೂಚಿ.

| ಕರಡು ಪತ್ರವು ಮಾನ್ಯಕುಲಸಚಿವರಿಂದ ಅನುಮೋದಿಸಲ್ಪಟ್ಟಿದೆ. |
|---|

ಆದೇಶದ ಮೇರೆಗೆ

Mangalahouri M

ಉಪಕುಲಸಚಿವರು

(ಮುದ್ರೆ: ಉಪಕುಲ ಸಚಿವರು, ಶೈಕ್ಷಣಿಕ ವಿಭಾಗ, ತುಮಕೂರು ವಿಶ್ವವಿದ್ಯಾಲಯ)

ಇವರಿಗೆ,

1. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಉಪಕುಲಸಚಿವರು, ಸಾಮಾನ್ಯ ಮತ್ತು ಅಭಿವೃದ್ಧಿ ವಿಭಾಗ/ಸಿಬ್ಬಂದಿ ವಿಭಾಗ/ಸಿಂಡಿಕೇಟ್ ವಿಭಾಗ/ ಕಾನೂನು ಕೋಶ/ಪರೀಕ್ಷಾಂಗ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ನಿರ್ದೇಶಕರು, IQAC, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ನೋಡಲ್ ಅಧಿಕಾರಿಗಳು, RU SA, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಎಲ್ಲಾ ಕೋವಿಡ್-19 ನೋಡಲ್ ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
6. ನಿರ್ದೇಶಕರು, ಪ್ರಸಾರಾಂಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ನಿರ್ದೇಶಕರು, ಸಂಶೋಧನೆ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
8. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
9. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
10. ನಿರ್ದೇಶಕರು/ಸಂಯೋಜಕರು, ದೈಹಿಕ ಶಿಕ್ಷಣ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
11. ಎಲ್ಲಾ ನಿಲಯಪಾಲಕರು, ವಿಶ್ವವಿದ್ಯಾನಿಲಯ ವಿದ್ಯಾರ್ಥಿನಿಲಯಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
12. ನಿರ್ದೇಶಕರು/ಸಂಯೋಜಕರು, ರಾಷ್ಟ್ರೀಯ ಸೇವಾ ಯೋಜನೆ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
13. ಕಾರ್ಯಪಾಲಕ ಅಭಿಯಂತರರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
14. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
15. ಉಪ ಗ್ರಂಥಪಾಲಕರು, ವಿ.ವಿ. ಗ್ರಂಥಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
16. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
17. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
18. ಕಚೇರಿ ಪ್ರತಿ.